ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☏:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ : ತು.ವಿ.: ಪ.ವಿ.ವಿ.ನಿ.-09:2022-23: 1229A ದಿನಾಂಕ:04.03.2023

## ಅಧಿಸೂಚನೆ

ವಿಷಯ : 2022-23 ನೇ ಸಾಲಿನ 2023 ರ ಏಪ್ರಿಲ್/ಮೇ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ (ಎಂ.ಬಿ.ಎ. ಮತ್ತು ಎಂ.ಸಿ.ಎ ಹೊರತುಪಡಿಸಿ) ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ (ನವೀನ ಮತ್ತು ಪೂರಕ) ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ : ನಾಲ್ಕನೇ ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆಯ ದಿನಾಂಕ: 17.05.2022

* * * * *

2022-23 ನೇ ಶೈಕ್ಷಣಿಕ ಸಾಲಿನ 2023 ರ ಏಪ್ರಿಲ್/ಮೇ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ಪದವಿಗೆ UUCMS ತಂತ್ರಾಂಶದ ಮೂಲಕ (ಶೈಕಣಿಕ ವಿಭಾಗದಿಂದ ಪ್ರವೇಶಾನುಮೋದನೆ ಪಡೆದಿರುವಂತಹ) ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ಎಂ.ಬಿ.ಎ. ಮತ್ತು ಎಂ.ಸಿ.ಎ ಹೊರತುಪಡಿಸಿ) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪ್ರಸಕ್ತ ಸಾಲಿನ ಸ್ನಾತಕೋತ್ತರ ಪದವಿಗಳ ಪ್ರಥಮ ಮತ್ತು ತೃತೀಯ ಸೆಮಿಸ್ಟರ್(ನವೀನ ಮತ್ತು ಪೂರಕ) ಸೆಮಿಸ್ಟರ್‌ಗಳಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಸಂಪೂರ್ಣ ದತ್ತಾಂಶವನ್ನು ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS) ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದ್ದು, ಸದರಿ ತಂತ್ರಾಂಶದಲ್ಲಿ ವಿಶ್ವವಿದ್ಯಾನಿಲಯದಿಂದ ಕಾಲೇಜು ಪ್ರಾಂಶುಪಾಲರು, ವಿಭಾಗದ ಮುಖ್ಯಸ್ಥರು/ಅಧ್ಯಕ್ಷರು/ಸಂಯೋಜಕರು, ಅಧ್ಯಾಪಕರು, ವಿದ್ಯಾರ್ಥಿಗಳು ಇತ್ಯಾದಿ ಹಂತಗಳವರೆಗೆ ಸೂಕ್ತ ಜವಾಬ್ದಾರಿಗಳನ್ನು ಹಂಚಿಕೆ ಮಾಡಿ ಪ್ರತ್ಯೇಕ ಲಾಗಿನ್ ವಿವರಗಳನ್ನು ಒದಗಿಸಲಾಗಿರುತ್ತದೆ. ಇದೊಂದು ಹೊಸ ವ್ಯವಸ್ಥೆಯಾಗಿರುವುದರಿಂದ ಸಂಬಂಧಪಟ್ಟ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ಮತ್ತು ಸಹಾಯ ಒದಗಿಸಲು ತಿಳಿಸಲಾಗಿದೆ.

ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಸಂಯೋಜಕರು ಮತ್ತು ಕಾಲೇಜು ಪ್ರಾಂಶುಪಾಲರು UUCMS ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ವಿದ್ಯಾರ್ಥಿಗಳು ಭರ್ತಿ ಮಾಡಿದ ಅರ್ಜಿ ನಮೂನೆಗಳನ್ನು ಪರಿಶೀಲಿಸಿ UUCMS ತಂತ್ರಾಂಶದ ಮೂಲಕ ಅನುಮೋದಿಸುವುದು ಹಾಗೂ ವಿದ್ಯಾರ್ಥಿಗಳ ಪ್ರವೇಶಾನುಮೋದನೆ, ಪರೀಕ್ಷೆ ತೆಗೆದುಕೊಳ್ಳುವವರ ಅಂಕಿ-ಅಂಶಗಳನ್ನು ಬಾಹ್ಯವಾಗಿಯೂ ಕ್ರೋಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ 10.04.2023 ದಿನಾಂಕದೊಳಗೆ ಈ ಕೆಳಕಂಡ ನಮೂನೆಯಂತೆ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

**ನಮೂನೆ**

| ಕ್ರ.ಸಂ. | ವಿದ್ಯಾರ್ಥಿಯ ಹೆಸರು | ನೋಂದಣಿ ಸಂಖ್ಯೆ | ತೆಗೆದುಕೊಂಡಿರುವ ವಿಷಯ | ಶುಲ್ಕ ಪಾವತಿಸಿದ ವಿವರ & ದಿನಾಂಕ |
|---|---|---|---|---|
| 1. | | | | |
| 2. | | | | |

**ಗಮನಿಸಬೇಕಾದ ದಿನಾಂಕಗಳು**

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 03.04.2023 |
| 2. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 06.04.2023 |
| 3. | ಕಾಲೇಜಿನವರು ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ವಿವರಗಳನ್ನು UUCMS ಮೂಲಕ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 10.04.2023 |

ಪ.ತಿ.ನೋ.

<u>ಪ್ರಥಮ ಸೆಮಿಸ್ಟರ್ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕದ ವಿವರಗಳು</u>

ಪರೀಕ್ಷಾ ಶುಲ್ಕಗಳ ವಿವರ - (Freshers-UUCMS)

| ಕ್ರ. ಸಂ. | ಪದವಿಗಳ ವಿವರ | ಪರೀಕ್ಷಾ ಶುಲ್ಕ | ಪೂರಕ ಪರೀಕ್ಷಾ ಶುಲ್ಕ |
|---|---|---|---|
| 1 | ಎಂ.ಎ. (ಕನ್ನಡ, ಇಂಗ್ಲಿಶ್, ಸಮಾಜಶಾಸ್ತ್ರ, ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ ಮತ್ತು ಸಾರ್ವಜನಿಕ ಆಡಳಿತ), ಎಂ.ಕಾಂ. ಹಾಗೂ ಎಂ.ಎಸ್ಸಿ. ಗಣಿತಶಾಸ್ತ್ರ | 1000.00 | 200.00 |
| 2 | ಎಂ.ಎಸ್.ಡಬ್ಲ್ಯು, ಎಂ.ಕಾಂ.(ಐ.ಎಸ್.) ಮತ್ತು ಎಂ.ಎಸ್ಸಿ. ಮನಃಶಾಸ್ತ್ರ | 1150.00 | 265.00 |
| 3 | ಎಂ.ಎ. ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ | 1300.00 | 200.00 |
| 4 | ಎಂ.ಎಸ್ಸಿ. (ಭೌತಶಾಸ್ತ್ರ, ರಸಾಯನಶಾಸ್ತ್ರ, ಪರಿಸರವಿಜ್ಞಾನ, ಜೀವರಸಾಯನಶಾಸ್ತ್ರ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪ್ರಾಣಿಶಾಸ್ತ್ರ, ಸಸ್ಯಶಾಸ್ತ್ರ, ಸಾವಯವ ರಸಾಯನಶಾಸ್ತ್ರ, ವಿದ್ಯುನ್ಮಾನ ಮಾಧ್ಯಮ) ಮತ್ತು ಎಂ.ಎಸ್. ಕಮ್ಯುನಿಕೇಷನ್ | 1600.00 | 200.00 |
| 5 | ಎಂ.ಎಸ್ಸಿ. ಜೀವ ತಂತ್ರಜ್ಞಾನ ಮತ್ತು ಸೂಕ್ಷ್ಮಜೀವಶಾಸ್ತ್ರ | 2600.00 | 200.00 |
| 6 | ಪಿ.ಜಿ. ಡಿಪ್ಲೊಮಾ (Coconut plantation, Environmental Impact) | 1150.00 | 265.00 |

**ಇತರೆ ಶುಲ್ಕಗಳು:** ಎಲ್ಲಾ ವರ್ಗದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕದ ಜೊತೆಯಲ್ಲಿ ಸಹ ಈ ಕೆಳಗೆ ನಮೂದಿಸಿರುವ ಇತರೆ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸುವುದು

| | | |
|---|---|---|
| 1 | ಅಂಕಪಟ್ಟಿ ಶುಲ್ಕ | 156.00 |
| 2 | ಪರೀಕ್ಷಾ ಸಿದ್ಧತಾ ಶುಲ್ಕ (Process fee) | 80.00 |

**ಸೂಚನೆ: ಈ ಮೇಲ್ಕಂಡ ಕೋಷ್ಟಕದಲ್ಲಿರುವ ಪರೀಕ್ಷಾ ಶುಲ್ಕವು ಪೂರಕ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ ಹಾಗೂ ಸದರಿ ವಿದ್ಯಾರ್ಥಿಗಳು SBI Collect ಮುಖಾಂತರ ಶುಲ್ಕವನ್ನು ಪಾವತಿಸಿ EMS ನಲ್ಲಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವುದು.**

2022-23 ನೇ ಸಾಲಿಗೆ UUCMS ತಂತ್ರಾಂಶದ ಮೂಲಕ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ (ನವೀನ & ಪೂರಕ) ವಿದ್ಯಾರ್ಥಿಗಳು ತಮ್ಮ ಲಾಗಿನ್ ಮೂಲಕ ಪರೀಕ್ಷಾ ಶುಲ್ಕ ಹಾಗೂ ಪತ್ರಿಕೆ/ವಿಷಯಗಳ ವಿವರಗಳನ್ನು ಸರಿಯಾಗಿ ನಮೂದಿಸುವಂತೆ ತಿಳಿಸಿ ಸೂಚನಾ ಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

**ಪರೀಕ್ಷಾ ಕೇಂದ್ರ ಹೊಂದಿರುವ ಕಾಲೇಜಿನವರು ತಮ್ಮ ಕೇಂದ್ರದಲ್ಲಿ ಪರೀಕ್ಷೆ ನಡೆಯುವ ಒಟ್ಟು ದಿನಗಳಲ್ಲಿ ಒಂದು ದಿನದ ಗರಿಷ್ಠ ವಿದ್ಯಾರ್ಥಿಗಳ ಸಂಖ್ಯೆಯನ್ನು ನಮೂದಿಸಿ ಪ್ರತಿ ವಿದ್ಯಾರ್ಥಿಗೆ ವಿಶ್ವವಿದ್ಯಾನಿಲಯವು ವಿಭಾಗವಾರು ನಿಗದಿಪಡಿಸಿರುವ ದರಗಳಂತೆ ಪ್ರತ್ಯೇಕ ಹುಂಡಿಗಳನ್ನು ಸಿದ್ಧಪಡಿಸಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವುದು.

ಉಲ್ಲೇಖ (1) ರ ದಿನಾಂಕ: 20.01.2023 ರ ಸಿಂಡಿಕೇಟ್ ಸಭಾ ನಿರ್ಣಯದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ ಸರ್ಕಾರದ ಡಿಬಿಟಿ (Direct Beneficiary Transfer) ಯೋಜನೆಯಡಿಯಲ್ಲಿ ನೇರವಾಗಿ ವಿದ್ಯಾರ್ಥಿಗಳ ಖಾತೆಗೆ ಜಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಹಾಗೂ ಸಂಬಂಧಪಟ್ಟ ಕಾಲೇಜಿಗಾಗಲಿ ಅಥವಾ ವಿಶ್ವವಿದ್ಯಾನಿಲಯಕ್ಕಾಗಲಿ ವಿದ್ಯಾರ್ಥಿ ವೇತನವು ಮಂಜೂರಾಗದ ಹಿನ್ನೆಲೆಯಲ್ಲಿ ಎಲ್ಲಾ ವರ್ಗದ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಪರೀಕ್ಷಾ ಶುಲ್ಕವನ್ನು ಸೆಮಿಸ್ಟರ್‌ವಾರು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು (ನವೀನ & ಪೂರಕ).

ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ. ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

ವಿಶ್ವವಿದ್ಯಾನಿಲಯದಿಂದ ಪ್ರಥಮ ಸೆಮಿಸ್ಟರ್‌ನಲ್ಲಿ ಪ್ರವೇಶಾನುಮೋದನೆ ಪಡೆದ ಎಲ್ಲಾ ಅರ್ಹ ವಿದ್ಯಾರ್ಥಿಗಳು ತಮ್ಮ ಲಾಗಿನ್ ಮೂಲಕ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ನಿಧಿಗೆ ನೇರವಾಗಿ UUCMS ತಂತ್ರಾಂಶದ ಮೂಲಕ ನಿಗದಿತ ದಿನಾಂಕದೊಳಗೆ ಪಾವತಿಸುವುದು.

***<u>ವಿ.ಸೂ.: ಪರೀಕ್ಷಾ ಶುಲ್ಕ ಪಾವತಿಸಿರುವ ಪಟ್ಟಿಯನ್ನು ದ್ವಿ-ಪ್ರತಿಗಳಲ್ಲಿ ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು.</u>***

ಪು.ತಿ.ನೋ.

ಪ್ರಾಯೋಗಿಕ ಪರೀಕ್ಷೆಗಳನ್ನು ಸೈದ್ಧಾಂತಿಕ ಪರೀಕ್ಷೆಗಳ ನಂತರ UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿ ಅಧ್ಯಕ್ಷರುಗಳಿಂದ ಅನುಮೋದನೆ ಪಡೆದುಕೊಂಡು UUCMS ತಂತ್ರಾಂಶದಲ್ಲಿ ನಮೂದಿಸುವುದು ಮತ್ತು ಮುಖ್ಯಸ್ಥರು/ ಸಂಯೋಜಕರು/ಪ್ರಾಂಶುಪಾಲರುಗಳು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಿಸುವುದು.

<u>ಆಂತರಿಕ ಅಂಕಗಳನ್ನು ಸಲ್ಲಿಸುವ ಕುರಿತು ಸೂಚನೆಗಳು:</u>

1. ಸೈದ್ಧಾಂತಿಕ (Theory) ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ಆಂತರಿಕ ಅಂಕಗಳನ್ನು ಮತ್ತು ವಿದ್ಯಾರ್ಥಿಗಳ ಹಾಜರಾತಿ ವಿವರಗಳನ್ನು ಮುಖ್ಯಸ್ಥರು/ಸಂಯೋಜಕರು ಕಾಲೇಜಿನವರು ನಮೂದಿಸಿ, ಪರಿಶೀಲಿಸಿ ಅನುಮೋದಿಸುವುದು ಹಾಗೂ ದೃಢೀಕೃತ ಪ್ರತಿಯನ್ನು ಕುಲಸಚಿವರು(ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವುದು ವಿಳಂಬವಾದಲ್ಲಿ ದಿನವೊಂದಕ್ಕೆ ರೂ. 1,000/- ಗಳಂತೆ ಗರಿಷ್ಠ ರೂ. 10,000-00 (ಹತ್ತು ಸಾವಿರ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ.

2. ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನೀಡುವುದು ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರು/ಸಂಯೋಜಕರ ಜವಾಬ್ದಾರಿಯಾಗಿದ್ದು,ಯಾವುದೇ ರೀತಿಯ ಲೋಪದೋಷಗಳಾಗದಂತೆ ಎಚ್ಚರಿಕೆ ವಹಿಸುವುದು. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಬದಲಿಸುವುದಿಲ್ಲ.

ಎಲ್ಲಾ ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಪಾಲರು ಸಹಕರಿಸಬೇಕಾಗಿ ಕೋರಲಾಗಿದೆ.

ಆದೇಶದ ಮೇರೆಗೆ,

10/3/23

ಕುಲಸಚಿವರು (ಪರೀಕ್ಷಾಂಗ)

ಗೆ, ಮುಖ್ಯಸ್ಥರು/ ಸಂಯೋಜಕರು /ನಿರ್ದೇಶಕರು / ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-01.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವಿಶ್ವವಿದ್ಯಾನಿಲಯದ ಅಂತರ್ಜಾಲ (Website) ದಲ್ಲಿ ಇಂದೇ ಪ್ರಕಟಿಸುವುದು.
8. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.